# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:08.02.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.17 (ಜೆ ಪಿ ಪಾರ್ಕ್) ರಲ್ಲಿ ಶ್ರೀ. ಎ. ಬಿ. ದೊಡ್ಡಯ್ಯ, (ಮುಖ್ಯ ಅಭಿಯಂತರರು, ದಾಸರಹಳ್ಳಿ ವಲಯ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ | ಹಾಜರಿದ್ದರು |
|---|---|---|---|
| 1 | ಶ್ರೀ ಎ. ಬಿ. ದೊಡ್ಡಯ್ಯ | ವಾರ್ಡ್ ನೋಡಲ್ ಅಧಿಕಾರಿಗಳು | ಹಾಜರಿದ್ದರು |
| 2 | ಶ್ರೀ ಅಜಗಣ್ಣಯ್ಯ ಸ್ವಾಮಿ | ಸಹಾಯಕ ಅಭಿಯಂತರರು | ಹಾಜರಿದ್ದರು |
| 3 | ಶ್ರೀ ರೋಹಿತ್ ಎಂ. ನೇತ್ರೇಕರ್ | ಬೆಸ್ಕಾಂ, ಜಾಲಹಳ್ಳಿ | ಹಾಜರಿದ್ದರು |
| 4 | ಶ್ರೀ ಆಶೀರ್ವಾದ | 17/ಬಿ, ಮೇಲ್ವಿಚಾರಕರು | ಹಾಜರಿದ್ದರು |
| 5 | ಶ್ರೀ ಎಂ. ಸಿ. ವಿಲ್ಸನ್ | ಮೇಲ್ವಿಚಾರಕರು | ಹಾಜರಿದ್ದರು |
| 6 | ಶ್ರೀ ವೆಂಕಟೇಶ್ | ಮೇಲ್ವಿಚಾರಕರು | ಹಾಜರಿದ್ದರು |
| 7 | ಬಸವರಾಜು | ವಾರ್ಡ್-17/ಸಿ ಮೇಲ್ವಿಚಾರಕರು | ಹಾಜರಿದ್ದರು |
| 8 | ಶ್ರೀ ಮುರಳಿ | ಮೇಲ್ವಿಚಾರಕರು | ಹಾಜರಿದ್ದರು |
| 9 | ಅಲಿಸ್ಟರ್ | ಮೇಲ್ವಿಚಾರಕರು | ಹಾಜರಿದ್ದರು |
| 10 | ನವೀನ್ ಬಿ. ಎನ್. | ಮಾರ್ಷಲ್ | ಹಾಜರಿದ್ದರು |
| 11 | ಹಾಗೂ ಇತರೆ ಸಾರ್ವಜನಿಕರು ಹಾಜರಿದ್ದರು | | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

### 1. ಬಿಬಿಎಂಪಿ ಅರಣ್ಯ ಇಲಾಖೆ:

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಒಣಗಿದ ಮರಗಳನ್ನು ತೆರವುಗೊಳಿಸಲು ಬಿಬಿಎಂಪಿ ಅರಣ್ಯ ಇಲಾಖೆಯವರು ಸಾರ್ವಜನಿಕರಿಗೆ ಮನವಿ ಪತ್ರ ನೀಡಲು ಸೂಚಿಸಿದ್ದು, ಆದರೆ ಇದುವರೆಗೂ ಯಾವುದೇ ಮನವಿ ಪತ್ರವು ಕಛೇರಿಗೆ ಬಂದಿರುವುದಿಲ್ಲ. ಆದ್ದರಿಂದ ಸಾರ್ವಜನಿಕರಿಗೆ ಮನವಿ ಪತ್ರ ನೀಡಲು ಅಧ್ಯಕ್ಷರು ಸೂಚಿಸಿರುತ್ತಾರೆ.

### 2. ಬೆಸ್ಕಾಂನವರು ಕಟಾವು ಮಾಡಿದ ಮರಗಳ ರೆಂಬೆಗಳನ್ನು ತೆರವುಗೊಳಿಸುವ ಬಗ್ಗೆ:-

ಮಾನ್ಯ ಅಧ್ಯಕ್ಷರು ಮಾತನಾಡಿ, ಪ್ರಸ್ತಾಪಿತ ವಿಷಯದ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಬೆಸ್ಕಾಂ) ರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

Scanned with CamScanner

3. ಕಂದಾಯ ವಿಭಾಗ:

ಕಳೆದ ಸಭೆಯಲ್ಲಿ ಚರ್ಚಿಸಿದಂತೆ, ವಾರ್ಡ್-17ರ ವ್ಯಾಪ್ತಿಯಲ್ಲಿ ಕಂಡುಬರುವ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಕಸ ಸುರಿಯುತ್ತಿರುವುದು ಕಂಡುಬಯುತ್ತಿದ್ದು, ಅಂತಹ ಜಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್ ನಿರ್ಮಾಣವಾಗುತ್ತಿರುತ್ತದೆ. ಸಂಬಂಧಪಟ್ಟ ನಿವೇಶನದ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಲು, ಕಂದಾಯ ಇಲಾಖೆಯವರಿಗೆ ಸೂಚಿಸಿದ್ದು, ಆದರೆ ಇದುವರೆಗೂ ಖಾಲಿ ನಿವೇಶನಗಳ ಮಾಹಿತಿ ನೀಡಿರುವುದಿಲ್ಲ. ವಾರ್ಡ್-17ರಲ್ಲಿ ಕಂಡುಬರುವ ಖಾಲಿ ನಿವೇಶನಗಳ ವಿವರಗಳನ್ನು ಇಂಜಿನಿಯರಿಂಗ್ ವಿಭಾಗಕ್ಕೆ ನೀಡಬೇಕೆಂದು ಅಧ್ಯಕ್ಷರು ಮತ್ತೊಮ್ಮೆ ತಿಳಿಸಿದರು.

4. ಕಸದ ವಿಲೇವಾರಿ ಬಗ್ಗೆ:

ಮೇಲ್ವಿಚಾರಕರು ಮಾತನಾಡಿ, ವಾರ್ಡ್‌ನ ವಿವಿಧ ಭಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದನ್ನು ತಡೆಯುವ ಸಲುವಾಗಿ, ಬ್ಲ್ಯಾಕ್‌ಸ್ಪಾಟ್‌ಗಳಲ್ಲಿ ಕಸ ಹಾಕುವವರಿಗೆ ದಂಡವಿಧಿಸುವ ಬಗ್ಗೆ ನಾಮಫಲಕ ಅಳವಡಿಸಲು ಕೋರಿದ್ದು, ಇದರ ಬಗ್ಗೆ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರೊಂದಿಗೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದಾಗಿ ಸಭೆಗೆ ತಿಳಿಸಿದರು. .

5. ಮಾಸ್ಕ್ ಹಾಕದಿರುವ ವ್ಯಕ್ತಿಗಳಿಗೆ ದಂಡ ವಿಧಿಸುವ ಬಗ್ಗೆ:-

ಪ್ರಸ್ತಾಪಿತ ವಿಷಯದ ಬಗ್ಗೆ ಮಾರ್ಷಲ್‌ಗಳೊಂದಿಗೆ ಚರ್ಚಿಸಲಾಗಿದ್ದು, ವಾರ್ಡ್‌ನಲ್ಲಿ ಮಾಸ್ಕ್ ಹಾಕದಿರುವ ಸಾರ್ವಜನಿಕರಿಗೆ ಸರ್ಕಾರದ ಆದೇಶದ ರೀತ್ಯಾ ಕಟ್ಟುನಿಟ್ಟಾಗಿ ದಂಡ ವಿಧಿಸಲು ಸೂಚಿಸಲಾಯಿತು.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

08/02/2021
(ಅಜಗಣ್ಣಯ್ಯ ಸ್ವಾಮಿ)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:17

12/02/2021
(ಬಿ. ಬಿ. ದೊಡ್ಡಯ್ಯ)
ಮುಖ್ಯ ಅಭಿಯಂತರರು ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:17

Scanned with CamScanner